RNU AIR DHARWAD

**MARCH 30,2025**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

ಮಳೆ ಹನಿಗಳನ್ನು ಸಂರಕ್ಷಿಸುವ ಮೂಲಕ ವ್ಯರ್ಥವಾಗುವ ನೀರಿನ ಪ್ರಮಾಣವನ್ನು ತಗ್ಗಿಸಬಹುದು, ಕಳೆದ ಕೆಲ ವರ್ಷಗಳಿಂದ ಕ್ಯಾಚ್ ದ ರೇನ್ ಅಭಿಯಾನದಡಿ, ದೇಶದ ಹಲವಾರು ಭಾಗಗಳಲ್ಲಿ ಜಲ ಸಂರಕ್ಷಣೆಯ ಅಭೂತಪೂರ್ವ ಕೆಲಸ ನಡೆದಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಹೇಳಿದರು. ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ ಮನ್ ಕಿ ಬಾತ್ ನ, 120 ನೇ ಆವೃತ್ತಿಯಲ್ಲಿ ಪ್ರಧಾನಿಯವರು, ರಾಜ್ಯದ, ಗದಗ ಜಿಲ್ಲೆಯ ಹಳ್ಳಿಗಳಲ್ಲಿ ಕೈಗೊಳ್ಳಲಾದ, ಕೆರೆಗಳ ಪುನಶ್ಚೇತನ ಕಾರ್ಯದ ಬಗ್ಗೆ ಶ್ಲಾಘನೆ ವ್ಯಕ್ತಪಡಿಸಿದರು. ಗದಗ ಜಿಲ್ಲೆಯ ಜನರು ಹಳ್ಳಿಗಳ ಕೆರೆಗಳನ್ನು ಸಂರಕ್ಷಿಸುವ ಮೂಲಕ ಮಾದರಿಯನ್ನು ರೂಪಿಸಿದ್ದಾರೆ. ಗ್ರಾಮಸ್ಥರು ಒಗ್ಗೂಡಿ ಕೆರೆಗಳಲ್ಲಿನ ಕಸ ಕಡ್ಡಿಗಳನ್ನು ಸ್ವಚ್ಛಗೊಳಿಸಿ, ಹೂಳೆತ್ತುವ ಕೆಲಸ ಮಾಡಿದ್ದಾರೆ. ಈಗ ಜನರು ಮಳೆಗಾಲಕ್ಕಾಗಿ ಕಾಯುತ್ತಿದ್ದು, ಕ್ಯಾಚ್ ದ ರೇನ್ ಅಭಿಯಾನಕ್ಕೆ ಉತ್ತಮ ಉದಾಹರಣೆಯಾಗಿದೆ ಎಂದಿದ್ದಾರೆ.

<><><>

ಇಂದು, ಹೊಸ ಸಂವತ್ಸರದ ಪ್ರಥಮ ದಿನ, ಯುಗಾದಿಯನ್ನು, ನಾಡಿನಾದ್ಯಂತ ಸಂಭ್ರಮ, ಸಡಗರದಿಂದ ಆಚರಿಸಲಾಗುತ್ತಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಮಂತ್ರಿ ನರೇಂದ್ರ ಮೋದಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸೇರಿದಂತೆ ಗಣ್ಯರು, ನಾಡಿನ ಜನತೆಗೆ ಶುಭಾಶಯ ಕೋರಿದ್ದಾರೆ. ಇಂದು ಪ್ರಸಾರಗೊಂಡ ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ ಮನ್ ಕಿ ಬಾತ್ ನಲ್ಲಿ, ಯುಗಾದಿ ಹಬ್ಬದ ಶುಭಾಶಯಗಳನ್ನು ತಿಳಿಸಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಕರ್ನಾಟಕ, ಆಂಧ್ರಪ್ರದೇಶ ಮತ್ತು ತೆಲಂಗಾಣದಲ್ಲಿ ಯುಗಾದಿ ಹಬ್ಬವನ್ನು ಬಹಳ ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ. ವೈವಿಧ್ಯಮಯವಾದ ನಮ್ಮ ದೇಶದಲ್ಲಿ, ಮುಂದಿನ ಕೆಲ ದಿನಗಳಲ್ಲಿ, ಅಸ್ಸಾಂ ನಲ್ಲಿ ರೊಂಗಾಲಿ ಬಿಹು, ಬಂಗಾಳದಲ್ಲಿ ಪೊಯಿಲಾಬೊಯಿಶಾಖ್, ಕಾಶ್ಮೀರದಲ್ಲಿ ನವ್ರೇಹ್ ಹೆಸರಿನಲ್ಲಿ ನವ ವರ್ಷ ಆಚರಿಸಲಾಗುತ್ತದೆ ಎಂದರು. ಸಂಭ್ರಮದ ವಾತಾವರಣದಲ್ಲಿ ಈದ್ ಹಬ್ಬವೂ ಮೇಳೈಸಿದ್ದು. ಹಬ್ಬದ ಸಂದರ್ಭದಲ್ಲಿ ದೇಶದ ಜನತೆಗೆ ಹೃತ್ಪೂರ್ವಕ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

<><><>

ರಾಜ್ಯದ ಜನತೆಗೆ ಯುಗಾದಿ ಹಬ್ಬದ ಶುಭಾಶಯಗಳನ್ನು ಕೋರಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದುಃಖದ ಕಹಿಬೇವು, ಸಂತಸದ ಸಿಹಿಬೆಲ್ಲ, ಎರಡನ್ನೂ ಸಮಚಿತ್ತದಿಂದ ಸ್ವೀಕರಿಸಿ, ಭರವಸೆಯೊಂದಿಗೆ ಮುನ್ನಡೆಯೋಣ. ಯುಗಾದಿಯು ನಾಡಿನಲ್ಲಿ ಸುಖ, ಶಾಂತಿ, ಸಮೃದ್ಧಿಯನ್ನು ತರಲಿ ಎಂದು ಹಾರೈಸಿದ್ದಾರೆ.

<><><>

**ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ತಮ್ಮ ಯುಗಾದಿ ಹಬ್ಬದ ಸಂದೇಶದಲ್ಲಿ ಹೊಸ ವರ್ಷವು ಎಲ್ಲರಿಗೂ ನೆಮ್ಮದಿ, ಶಾಂತಿ ನೀಡಲಿ, ಎಲ್ಲ ರಂಗದಲ್ಲೂ ಸಾಮಾಜಿಕ, ಆರ್ಥಿಕ ಅಭಿವೃದ್ಧಿ ಸಾಧ್ಯವಾಗಲಿ ಎಂದಿದ್ದಾರೆ.**

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>